SUF (32)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014-15ನೇ ಸಾಲಿಗೆ ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ ಸಹಾಯಧನ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂ: ಕೃಇ/45/ಕೃಯೋಕಾ/2014, ದಿ:11-04-2014.

2. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಮೈಸೂರು ರವರ ಪತ್ರ ಸಂ: ರಾಗ್ರಾಸಂ/ತರಬೇತಿ/38(III)96-97, ದಿ: 30-06-2014.

3. ಕೃಷಿ ಆಯುಕ್ತರ ಪತ್ರ ಸಂ:ಪಿಎಲ್‌ಎನ್/ತಾಂ-4/ANSSIRD/2014-15, ದಿ: 07-07-2014.

<u>ಪ್ರಸ್ತಾವನೆ:</u>

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2013-14 ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿ ಯೋಜನೆಗಳನ್ನು 2014-15ನೇ ಸಾಲಿಗೆ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಿದೆ.

ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ವತಿಯಿಂದ ರಾಜ್ಯದ 05 ಜಿಲ್ಲೆಗಳಾದ ಬೆಂಗಳೂರು, ದಾವಣಗೆರೆ, ಧಾರವಾಡ, ಗುಲ್ಬರ್ಗ ಮತ್ತು ಮಂಗಳೂರಿನಲ್ಲಿ ಸ್ಯಾಟ್‌ಕಾಂ ಸಬ್ ಸ್ಟುಡಿಯೋವನ್ನು ಸ್ಥಾಪಿಸಿದ್ದು, ಸದರಿ ಸಬ್ ಸ್ಟುಡಿಯೋಗಳಿಂದ ಪ್ರಸರಣವಾಗುವ ತರಬೇತಿ ಕಾರ್ಯಕ್ರಮಗಳನ್ನು ಮೈಸೂರಿನ ಮೂಲ ಸ್ಟುಡಿಯೋದಲ್ಲಿ ಎಡಿಟ್ ಮಾಡಿ ನಂತರ ಅಪ್-ಲಿಂಕ್ ಮಾಡಲು **MASTER CONTROL ROOM** ನ ಅವಶ್ಯಕತೆ ಇದ್ದು, ಸದರಿ ಮಾಸ್ಟರ್ ಕಂಟ್ರೋಲ್ ರೂಂನ ನಿರ್ಮಾಣ ಮತ್ತು ಉಪಕರಣಗಳ ಖರೀದಿಗಾಗಿ ಅವಶ್ಯವಿರುವ ಅನುದಾನಕ್ಕೆ 2014-15ನೇ ಸಾಲಿನಲ್ಲಿ ಸಂಸ್ಥೆಗೆ ನೀಡಲು ಉದ್ದೇಶಿಸಿರುವ ರೂ.5.00 ಲಕ್ಷಗಳನ್ನು ಸದರಿ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಬಿಡುಗಡೆ ಮಾಡುವಂತೆ ಕೃಷಿ ಆಯುಕ್ತರನ್ನು ಕೋರಿರುತ್ತಾರೆ.

ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಕೃಷಿ ಆಯುಕ್ತರು ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, 2014-15ನೇ ಸಾಲಿನಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಗೆ ಸಹಾಯಾನುದಾನ ನೀಡುವ ಸಲುವಾಗಿ 2014-15ನೇ ಸಾಲಿನ ಆಯವ್ಯಯದಲ್ಲಿ ರೂ.5.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ:2401-00-800-1-40 (ಯೋಜನೆ) "ಇತರೆ ಕೃಷಿ ಯೋಜನೆಗಳು" ಉಪ ಲೆಕ್ಕ ಶೀರ್ಷಿಕೆಯ 100 ರಡಿ ಅನುದಾನವನ್ನು ಒದಗಿಸಿಕೊಳ್ಳಲಾಗಿರುವುದರಿಂದ ಸದರಿ ಸಂಸ್ಥೆಗೆ ಅನುದಾನ ಬಿಡುಗಡೆ ಮಾಡಲು ಕೋರುತ್ತಾ ಹಾಗೂ ಸದರಿ ಸಂಸ್ಥೆ ಸಲ್ಲಿಸುವ ಬಿಲ್ಲುಗಳಿಗೆ ಕೃಷಿ ನಿರ್ದೇಶಕರು Grant-in-aid Bill <u>ಮುಖಾಂತರ ಪಾವತಿಸಲು ಆದೇಶವ</u>ನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಕೃಇ/129/ಕೃಯೋಕಾ/2014, ಬೆಂಗಳೂರು,</u>
<u>ದಿನಾಂಕ: 19-08-2014.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2014-15ನೇ ಸಾಲಿನ ಇತರೆ ಕೃಷಿ ಯೋಜನೆಗಳು ಚಾಲ್ತಿ ಯೋಜನೆಯ ಲೆಕ್ಕ ಶೀರ್ಷಿಕೆ:2401-00-800-1-40, ಉಪ ಶೀರ್ಷಿಕೆ:100 ರ ಅಡಿ ಈಗಾಗಲೇ ಬಿಡುಗಡೆಗೊಳಿಸಿರುವ ಅನುದಾನದ ಮೊತ್ತದಲ್ಲಿ ಸಹಾಯಾನುದಾನವನ್ನಾಗಿ ರೂ.5.00 ಲಕ್ಷಗಳನ್ನು (ಐದು ಲಕ್ಷ ರೂಪಾಯಿಗಳು ಮಾತ್ರ) ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಗೆ ಮಾಸ್ಟರ್ ಕಂಟ್ರೋಲ್ ರೂಂನ ನಿರ್ಮಾಣ ಮತ್ತು ಉಪಕರಣಗಳ ಖರೀದಿಗಾಗಿ ನೀಡಲು ಅನುಮತಿ ನೀಡಿದೆ. ಸದರಿ ಸಂಸ್ಥೆಯು ಈ ಸಂಬಂಧ ಸಲ್ಲಿಸುವ ಬಿಲ್ಲುಗಳಿಗೆ ಮೇಲು ಸಹಿ ಮಾಡುವ ಅಧಿಕಾರವನ್ನು ಕೃಷಿ ನಿರ್ದೇಶಕರಿಗೆ (Grant-in-aid Bill) ನೀಡಿ ಆದೇಶಿಸಿದೆ.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ/03/ಟಿಎಫ್‌ಪಿ/2014, ದಿನಾಂಕ:04-04-2014ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜ್ಯೋತಿ.ಆರ್.ಜೆ),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಮಹಾಲೇಖಪಾಲರು, (ಲೆಕ್ಕ ಪತ್ರ ಮತ್ತು ತನಿಖೆ) ಕರ್ನಾಟಕ, ಬೆಂಗಳೂರು.
5. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು-570 011.
7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
9. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.